## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.

## ಸಿ.ಸಿ. ನಂ.1770/2021

ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಹೆಸರು | ತಿಪ್ಪೇಸ್ವಾಮಿ | ಸಿಡಬ್ಲ್ಯೂ-7 |
| ತಂದೆಯ ಹೆಸರು | ಕೋಟೆ ಬೋರಯ್ಯ | ಪಿ ಡಬ್ಲ್ಯೂ-6 |
| ವಯಸ್ಸು | 52 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಮಲ್ಲೂರಹಳ್ಳಿ | ದಿಃ04-10-2025. |

### ಮುಖ್ಯ ವಿಚಾರಣೆ : ಮಾನ್ಯ ಎ.ಪಿ.ಪಿ. ರವರಿಂದಃ

ಚಾಸಾ-1 ನನಗೆ ಗೊತ್ತು. ಚಾಸಾ-3 ನನ್ನ ತಮ್ಮ. ಸಾಕ್ಷಿಗೆ ನಿಪಿಃ2 ರ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಸಿ)ಅಂತಾ ಗುರುತಿಸಲಾಯಿತು. ಸದರಿ ಸಹಿಯನ್ನು ಈಗ್ಗೆ 4 ವರ್ಷಗಳ ಕೆಳಗೆ ಮಲ್ಲೂರಹಳ್ಳಿಯ ಗಿಡ್ಡ ಓಬಯ್ಯರವರ ಮನೆಯ ಮುಂದೆ ಮಾಡಿರುತ್ತೇನೆ. ಗಲಾಟೆಯ ವಿಚಾರಕ್ಕೆ ಸಹಿ ಮಾಡಿರುತ್ತೇನೆ. ಪೊಲೀಸರು ಯಾವುದೇ ಕ್ರಮ ಜರುಗಿಸಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಸದರಿ ಸಮಯದಲ್ಲಿ ನನ್ನನ್ನು ಹೊರತುಪಡಿಸಿ ಬೇರೆ ಯಾರು ಇರಲಿಲ್ಲ. ನಿಪಿಃ2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನಿಪಿಃ2 ರಲ್ಲಿರುವ ಸಂಗತಿಗಳನ್ನು ಓದಿ ಹೇಳಿರುತ್ತಾರೆ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಬಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

### ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ

ದಿಃ15-04-2021 ರಂದು ಚಾಸಾ-3 ರವರ ಮನೆಯ ಮುಂದೆ ರೆಖಲಗೆರೆ ಕಾವಲು-ಮಲ್ಲೂರಹಳ್ಳಿ ರಸ್ತೆಯಲ್ಲಿ ನನ್ನ ಹಾಗೂ ಚಾಸಾ-1 ಮತ್ತು 3 ರವರ ಸಮಕ್ಷಮ ನಿಪಿಃ2 ರಂತೆ ಮಹಜರ ಕ್ರಮ ಜರುಗಿಸಿ ಮು.ಮಾ-1 ನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿ. ಸದರಿ ಸಮಯದಲ್ಲಿ ಚಾಸಾ-1 ಮತ್ತು 3 ರವರು ಹಾಜರಿದ್ದು, ನಿಪಿಃ2 ಕ್ಕೆ ಸಹಿ ಮಾಡಿರುತ್ತಾರೆ ಎಂದರೆ ಸರಿ.

### ಪಾಟೀ ಸವಾಲುಃ ಶ್ರೀ ಟಿ ಟಿ., ಆರೋಪಿಯ ಪರ ವಕೀಲರಿಂದಃ

ಪೊಲೀಸರು ಮಹಜರಿಗೆ ಸಹಕರಿಸುವಂತೆ ನನಗೆ ಯಾವುದೇ ನೋಟೀಸ್ ನೀಡಿಲ್ಲ. ಮಹಜರ ಮಾಡಲು ಎಷ್ಟು ಜನ ಪೊಲೀಸ ಸಿಬ್ಬಂದಿ ಬಂದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಪೊಲೀಸರು ಮಹಜರಿಗೆ ಬಂದ ನಿಖರವಾದ ದಿನಾಂಕ, ತಿಂಗಳು ಮತ್ತು ವರ್ಷ ನನಗೆ ಗೊತ್ತಿಲ್ಲ. ನಿಪಿಃ2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರು ಒಂದು ಬಿಳಿ ಹಾಳೆಯ ಮೇಲೆ ಸಹಿ ಮಾಡಲು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿ. ಮು.ಮಾ–1 ನ್ನು ಇದೆ ಮೊದಲನೆಬಾರಿಗೆ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ–1 ನ್ನು ಗಲಾಟೆಯಾದ ಜಾಗದಲ್ಲಿ ನೋಡಿರುತ್ತೇನೆ. ಮು.ಮಾ–1 ರ ತರಹ ಕಲ್ಲುಗಳು ನಮ್ಮ ಗ್ರಾಮದಲ್ಲಿ ಎಲ್ಲ ಕಡೆ ಸಿಗುತ್ತವೆ ಎಂದರೆ ಸರಿ. ಮು.ಮಾ–1 ರ ಮೇಲೆ ನಾನು ಸಹಿ ಮಾಡಿಲ್ಲ. ನಾನು ಮತ್ತು ಚಾಸಾ–1 ರವರು ವಿಶ್ವಾಸದಿಂದ ಇದ್ದೇವೆ ಎಂದರೆ ಸರಿ. ಆರೋಪಿಗೂ ಮತ್ತು ಚಾಸಾ–1 ರವರಿಗೆ ಹಳೆಯ ದ್ವೇಷ ಇದೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿಃ2 ರಂತೆ ಯಾವುದೇ ಮಹಜರ ಮಾಡಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ, ನಾನು ಚಾಸಾ–1 ರವರ ಮಾತನ್ನು ಕೇಳಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ.1770/2021**

ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಹೆಸರು | ರುದ್ರೇಶ | ಸಿಡಬ್ಲ್ಯೂ-4 |
| ತಂದೆಯ ಹೆಸರು | ಬಸಯ್ಯ | ಪಿ ಡಬ್ಲ್ಯೂ-5 |
| ವಯಸ್ಸು | 46 ವರ್ಷ | |
| ಉದ್ಯೋಗ | ಕೂಲಿಕೆಲಸ | |
| ವಾಸಸ್ಥಳ | ರಾಮದುರ್ಗ | ದಿಃ04-10-2025. |

**ಮುಖ್ಯ ವಿಚಾರಣೆ : ಮಾನ್ಯ ಎ.ಪಿ.ಪಿ. ರವರಿಂದಃ**

ಚಾಸಾ-1 ರಿಂದ 3, ಚಾಸಾ-5 ಮತ್ತು 6 ನನಗೆ ಗೊತ್ತು. ಆರೋಪಿ ಲೋಕೇಶ ನನಗೆ ಗೊತ್ತಿಲ್ಲ. ನಾನು ಮಲ್ಲೂರಹಳ್ಳಿಯ ಹೆಣ್ಣು ಮಗಳನ್ನು ಮದುವೆ ಆಗಿರುತ್ತೇನೆ. ಈಗ್ಗೆ 5-6 ವರ್ಷಗಳ ಕೆಳಗೆ ನಾನು ನನ್ನ ಹೆಂಡತಿಯ ತವರು ಮನೆಯಾದ ಮಲ್ಲೂರಹಳ್ಳಿಗೆ ಹಬ್ಬಕ್ಕೆಂದು ಹೋಗಿದ್ದಾಗ ನನ್ನ ಮಾವನಾದ ತಿಪ್ಪಯ್ಯನವರ ಮನೆಯ ಮುಂದೆ ರಸ್ತೆ ಬದಿಯಲ್ಲಿ ನಿಂತಿದ್ದಾಗ ಆರೋಪಿ ಲೋಕೇಶರವರು ಚಾಸಾ-1 ರವರಿಗೆ ಹಲ್ಲೆ ಮಾಡಿರುತ್ತಾರೆ ಆದರೆ ಕೈಯಿಂದಲೊ ಅಥವಾ ಕಲ್ಲಿನಿಂದಲೊ ಎಂದು ನೆನಪಾಗುತ್ತಿಲ್ಲ. ಇದನ್ನು ಹೊರತುಪಡಿಸಿ ನನಗೆ ಬೇರೆ ಯಾವುದೇ ವಿಷಯ ಗೊತ್ತಿಲ್ಲ. ಸದರಿ ವಿಚಾರವಾಗಿ ಪೊಲೀಸರು ನನ್ನ ಹೇಳಿಕೆ ಪಡೆದಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಬಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿಃ15-04-2021 ರಂದು ಬೆಳಿಗ್ಗೆ 7-00 ಗಂಟೆಗೆ ಚಾಸಾ-1 ಮತ್ತು ಆರೋಪಿಯ ನಡುವೆ ಜಗಳ ಆಗಿರುತ್ತದೆ ಎಂದರೆ ಸರಿ. ಸದರಿ ಸಮಯದಲ್ಲಿ ಆರೋಪಿಯು ಚಾಸಾ-1 ರವರಿಗೆ ಸೂಳೆಮಗನೇ ಬೊಳಿಮಗನೇ ಎಂದು ಅವಾಚ್ಯವಾಗಿ ಬೈದಿರುತ್ತಾರೆ ಎಂದರೆ ಸರಿ. ಸದರಿ ಸಮಯದಲ್ಲಿ ಆರೋಪಿಯು ಕೈಯಿಂದ ಚಾಸಾ-1 ರವರ ಕೆನ್ನೆಗೆ ಹಲ್ಲೆ ಮಾಡಿರುತ್ತಾನೆ ಮತ್ತು ಕಲ್ಲಿನಿಂದ ಚಾಸಾ-1 ರವರ ಎದೆಗೆ ಹಲ್ಲೆ ಮಾಡಿರುತ್ತಾನೆ ಎಂದರೆ ಸರಿ. ಸದರಿ ಜಗಳವನ್ನು ನಾನು ಮತ್ತು ಚಾಸಾ-3, 5 ರವರು ಬಿಡಿಸಿರುತ್ತೇವೆ ಎಂದರೆ ಸರಿ. ಗಲಾಟೆಯ ನಂತರ ಚಾಸಾ-1 ರವರನ್ನು ಚಾಸಾ-2 ರವರು ಚಿಕಿತ್ಸೆಗಾಗಿ ಆ್ಯಂಬುಲೆನ್ಸ್ ನಲ್ಲಿ ಕರೆದುಕೊಂಡು ಹೋದರು ಎಂದರೆ ಸರಿ. ಆರೋಪಿಯು ಚಾಸಾ-1 ರವರಿಗೆ ನ್ಯಾಯಾಲಯದ ಮುಂದಿರುವ ಮು.ಮಾ-1 ರಿಂದ ಗಲಾಟೆಯಾದ ದಿನ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿ. ಈ ರೀತಿ ನಾನು ದಿಃ15-04-2021

ರಂದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿಃ4 ಎಂದು ಗುರುತಿಸಲಾಯಿತು. ಸದರಿ ವಿಚಾರವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಶ್ರೀ ಟಿ ಟಿ., ಆರೋಪಿಯ ಪರ ವಕೀಲರಿಂದಃ</u>**

ನನ್ನ ಸ್ವಂತ ಊರು ರಾಮದುರ್ಗ ಎಂದರೆ ಸರಿ. ನಾನು ನನ್ನ ಹೆಂಡತಿಯ ತವರು ಮನೆಗೆ ಹಬ್ಬಕ್ಕೆಂದು ಹೋದ ನಿಖರವಾದ ದಿನಾಂಕ, ತಿಂಗಳು ಮತ್ತು ವರ್ಷ ನನಗೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ಗಲಾಟೆ ಆಗಿಲ್ಲ ಎಂದರೆ ಸರಿಯಲ್ಲ. ಗಲಾಟೆ ಸಮಯದಲ್ಲಿ ನನ್ನನ್ನು ಹೊರತುಪಡಿಸಿ ಘಟನಾ ಸ್ಥಳದಲ್ಲಿ 5 ಜನ ಇರುತ್ತೇವೆ. ಸದರಿ 5 ಜನರ ಹೆಸರು ಮತ್ತು ವಿಳಾಸ ನನಗೆ ಗೊತ್ತಿಲ್ಲ. ಆರೋಪಿ ಚಾಸಾ–1 ರವರಿಗೆ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿ ಚಾಸಾ–1 ರವರಿಗೆ ಎದುರಿನಲ್ಲಿ ನಿಂತು ಹಲ್ಲೆ ಮಾಡಿರುತ್ತಾರೆ. ಆರೋಪಿ ಚಾಸಾ–1 ರವರ ಯಾವ ಭಾಗದ ಕೆನ್ನೆಗೆ ಹಲ್ಲೆ ಮಾಡಿರುತ್ತಾರೆ ಎಂದು ನೆನಪಿಲ್ಲ. ನಾನು ಮತ್ತು ಚಾಸಾ–1 ರವರು ವಿಶ್ವಾಸದಿಂದ ಇರುವ ಕಾರಣ ಆರೋಪಿ ಚಾಸಾ–1 ರವರಿಗೆ ಕೈಯಿಂದ ಹಾಗೂ ಕಲ್ಲಿನಿಂದ ಎದೆಗೆ ಹಾಗೂ ಕೆನ್ನೆಗೆ ಹಲ್ಲೆ ಮಾಡಿರುತ್ತಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ–3, 5 ರವರು ಗಲಾಟೆಯನ್ನು ಬಿಡಿಸಿರುತ್ತೇವೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ–1 ನ್ನು ಇದೆ ಮೊದಲಬಾರಿಗೆ ನ್ಯಾಯಾಲಯದ ಮುಂದೆ ನೋಡುತ್ತಿದ್ದೇನೆ ಎಂದರೆ ಸರಿ. ಚಾಸಾ–1 ರವರು ಚಾಸಾ–2 ರವರನ್ನು ಆ್ಯಂಬುಲೆನ್ಸ್ ನಲ್ಲಿ ಚಿಕಿತ್ಸೆಗೆ ಕರೆದುಕೊಂಡು ಹೋಗಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಮತ್ತು ಚಾಸಾ–1 ರವರಿಗೆ ಹಳೆಯ ದ್ವೇಷ ಇರುವ ಕಾರಣ ಚಾಸಾ–1 ರವರು ನೀಡಿರುವ ಸುಳ್ಳು ದೂರಿಗೆ ಪೂರಕವಾಗಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ